27	ತುಮಕೂರು	31.00
28	ಉಡುಪಿ	15.00
29	ಉತ್ತರಕನ್ನಡ	52.50
30	ಒಟ್ಟು	**1099.50**

131 ಶ್ರೀ ಬಾಲಕೃಷ್ಣ ಹೆಚ್.ಪಿ (ಮಾಗಡಿ)

ಬಿ. ಶ್ರೀರಾಮುಲು(ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ರಾಮನಗರ ಜಿಲ್ಲೆ, ಮಾಗಡಿ ಪಟ್ಟಣದ ಸಾರ್ವಜನಿಕ ಆಸ್ಪತ್ರೆಯನ್ನು ಎಂದಿನಿಂದ 100 ಹಾಸಿಗೆಗಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೆ ಏರಿಸಲಾಯಿತು; ಇದರ ರೂಪುರೇಷೆಗಳೇನು:

ಸರ್ಕಾರಿ ಆದೇಶ ಸಂಖ್ಯೆ: ಆಕುಕ 86 ಸಿಜಿಎಸ್ 2005, ದಿನಾಂಕ: 4-01-2006 ರಲ್ಲಿ ಮಾಗಡಿ ಪಟ್ಟಣದ ಸಾರ್ವಜನಿಕ ಆಸ್ಪತ್ರೆಯನ್ನು 30 ಹಾಸಿಗೆಗಳಿಂದ 100 ಹಾಸಿಗೆಗಳಿಗೆ ಮೇಲ್ದರ್ಜೆಗೇರಿಸಲಾಗಿದೆ.

100 ಹಾಸಿಗೆಗಳ ಸಾಮರ್ಥ್ಯಕ್ಕೆ ಕಟ್ಟಡ ಕಾಮಗಾರಿ ಕೈಗೊಳ್ಳಲು ರೂ. 230 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ದಿನಾಂಕ: 14-12-2006 ರಲ್ಲಿ ಮಂಜೂರಾತಿ ನೀಡಲಾಗಿದೆ. ಕಾಮಗಾರಿಯನ್ನು ಮೆ: ನಾಗಾರ್ಜುನ ಕನ್ಸಟ್ರಕ್ಷನ್ ಕಂಪನಿ, ಬೆಂಗಳೂರು ರವರಿಗೆ ವಹಿಸಲಾಗಿದೆ.

ಸದರಿ ಮೇಲ್ದರ್ಜೆಗೇರಿಸಿದ ಆಸ್ಪತ್ರೆಯಲ್ಲಿ ಹೆಚ್ಚುವರಿಯಾಗಿ ನೆಲಮಹಡಿಯಲ್ಲಿ ಮೇಜರ್ ಆಪರೇಷನ್ ಥಿಯೇಟರ್, ಹೆರಿಗೆ ಕೊಠಡಿ, ಕ್ಷ-ಕಿರಣ ಕೊಠಡಿ ಹಾಗೂ ಹಾಲಿ ಕಟ್ಟಡಕ್ಕೆ ನೀರು ಸರಬರಾಜು ಮತ್ತು ನೈರ್ಮಲೀಕರಣ ದುರಸ್ತಿ, ವಿದ್ಯುತ್ ಹಾಗೂ ಶೌಚಾಲಯ ದುರಸ್ತಿ ಮತ್ತು ಒಳ ಹಾಗೂ ಹೊರ ಗೋಡೆಗಳಿಗೆ ಮತ್ತು ಬಾಗಿಲು ಕಿಟಕಿಗಳಿಗೆ ಬಣ್ಣ ಹಚ್ಚುವುದು ಒಳಗೊಂಡಿರುತ್ತದೆ.

ಮೊದಲನೇ ಮಹಡಿಯಲ್ಲಿ ಕಿವಿ, ಮೂಗು ಮತ್ತು ಗಂಟಲು ತಜ್ಞರು, ಮೂಳೆ ತಜ್ಞರು, ಮಕ್ಕಳ ತಜ್ಞರು, ನೇತ್ರ ತಜ್ಞರು, ಕಛೇರಿ ಕೊಠಡಿಗಳು, ಪ್ರಯೋಗಾಲಯ, ರಕ್ತ ಶೇಕರಣಾ ಕೊಠಡಿ, ವಿಶೇಷ ವಾರ್ಡ್‌ಗಳು, ಶೌಚಾಲಯಗಳು ಹಾಗೂ ಸಭಾಂಗಣವನ್ನು ಒಳಗೊಂಡಿರುತ್ತದೆ.

ಆ) ಈ ಆಸ್ಪತ್ರೆಯ ಕಟ್ಟಡದ ಕಾಮಗಾರಿ ಪೂರ್ಣಗೊಂಡಿದೆಯೇ; ಹಾಗಿಲ್ಲದಿದ್ದಲ್ಲಿ, ಯಾವಾಗ ಪೂರ್ಣಗೊಳಿಸಲಾಗುವುದು;

ಕಾಮಗಾರಿಯು ಮುಕ್ತಾಯದ ಹಂತದಲ್ಲಿದೆ ಹಾಗೂ ಅಕ್ಟೋಬರ್-2009ರ ವೇಳೆಗೆ ಪೂರ್ಣಗೊಳಿಸಲಾಗುತ್ತದೆ.

ಇ) ಈ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಿದ ಅನುಗುಣವಾಗಿ ವೈದ್ಯಕೀಯ ಹಾಗೂ ಇತರೆ ಸಿಬ್ಬಂದಿಯನ್ನು ನಿಯೋಜಿಸಲಾಗಿದೆಯೇ; ಹಾಗಿಲ್ಲದಿದ್ದಲ್ಲಿ, ಯಾವಾಗ ನಿಯೋಜಿಸಲಾಗುವುದು?

ಈ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಿದ ಅನುಗುಣವಾಗಿ 12 ವೈದ್ಯರು ಹಾಗೂ 1 ದಂತ ವೈದ್ಯರ ಹುದ್ದೆಗಳು ಮಂಜೂರಾಗಿದ್ದು, ಎಲ್ಲಾ ಹುದ್ದೆಗಳು ಭರ್ತಿಯಾಗಿವೆ. ಇದಲ್ಲದೆ 61 ವೈದ್ಯೇತರ ಹುದ್ದೆಗಳು ಮಂಜೂರಾಗಿದ್ದು, ಆ ಪೈಕಿ 23 ಹುದ್ದೆಗಳು ಭರ್ತಿಯಾಗಿವೆ. ಪ್ರಸ್ತುತ 5245 ವೈದ್ಯೇತರ ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಜಾರಿಯಲ್ಲಿದ್ದು, ಅದು ಮುಗಿದ ನಂತರ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

139 ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಬಾಲ್ಕಿ) MLA
ಪ್ರೊ.ಡಾ.ಮುಮ್ತಾಜ್ ಅಲಿ ಖಾನ್ (ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು)

ಅ) ಕಳೆದ ಒಂದು ವರ್ಷದಿಂದ ಈವರೆವಿಗೆ ವಿವಿಧ ಜಿಲ್ಲೆಗಳಲ್ಲಿ ನಿರ್ಮಿಸಲಾಗಿರುವ ಶಾದಿಮಹಲ್ ಸಂಖ್ಯೆ ಎಷ್ಟು; ಇದಕ್ಕಾಗಿ ವೆಚ್ಚವಾಗಿರುವ ಹಣವೆಷ್ಟು (ಜಿಲ್ಲಾವಾರು ಅಂಕಿ ಅಂಶಗಳನ್ನು ಒದಗಿಸುವುದು);

2008–9ನೇ ಸಾಲಿನಲ್ಲಿ ಒಟ್ಟು 102 ಸಂಸ್ಥೆಗಳಿಗೆ ಶಾದಿಮಹಲ್ ನಿರ್ಮಿಸಲು ರೂ. 1099.50 ಲಕ್ಷಗಳನ್ನು ಖರ್ಚು ಮಾಡಲಾಗಿದೆ. ಜಿಲ್ಲಾವಾರು ಅಂಕಿ ಅಂಶಗಳನ್ನು ಅನುಬಂಧ–1 ರಲ್ಲಿ ಲಗತ್ತಿಸಿದೆ.

ಆ) ಸದರಿ ಅವಧಿಯಲ್ಲಿ ಬೀದರ್ ಜಿಲ್ಲೆಯಿಂದ ಯಾವ ಯಾವ ಸ್ಥಳಗಳಲ್ಲಿ ಶಾದಿಮಹಲ್‌ಗಳ ನಿರ್ಮಾಣಕ್ಕಾಗಿ ಸರ್ಕಾರಕ್ಕೆ ಪ್ರಸ್ತಾವನೆ ಬಂದಿರುತ್ತದೆ;

2008–09ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಶಾದಿಮಹಲ್ ನಿರ್ಮಾಣಕ್ಕೆ ಪ್ರಸ್ತಾವನೆ ಬಂದಿರುವುದಿಲ್ಲ.

ಇ) ಈ ಪೈಕಿ ಎಷ್ಟು ಪ್ರಸ್ತಾವನೆಗಳಿಗೆ ಅನುಮೋದನೆ ಸರ್ಕಾರದಿಂದ ದೊರಕಿದೆ; ಉದ್ಭವಿಸುವುದಿಲ್ಲ.

ಈ) ಕಳೆದ ಸಾಲಿನಲ್ಲಿ ಆಯವ್ಯಯ ಹಾಗೂ ಪ್ರಸಕ್ತ ಸಾಲಿನ ಹಣಕಾಸು ವರ್ಷದಲ್ಲಿ ಶಾದಿಮಹಲ್‌ಗಳ ನಿರ್ಮಾಣಕ್ಕಾಗಿ ಆಯವ್ಯಯದಲ್ಲಿ ಎಷ್ಟು ಹಣವನ್ನು ಮೀಸಲಾಗಿಡಲಾಗಿದೆ.

2008–09ನೇ ಸಾಲಿನಲ್ಲಿ ರೂ. 1500.00 ಲಕ್ಷಗಳ ಆಯವ್ಯಯ ಒದಗಿಸಿದ್ದು, ಪರಿಷ್ಕೃತ ಆಯವ್ಯಯ ರೂ. 1000.00 ಲಕ್ಷಗಳು, ಪ್ರಸಕ್ತ ಸಾಲಿನಲ್ಲಿ ರೂ. 1500.00 ಲಕ್ಷಗಳ ಆಯವ್ಯಯವನ್ನು ಒದಗಿಸಲಾಗಿದೆ.

ಉ) ಈ ಪೈಕಿ ಈವರೆವಿಗೆ ಬಿಡುಗಡೆಯಾದ ಹಣವೆಷ್ಟು (ಜಿಲ್ಲಾವಾರು ವಿವರಗಳನ್ನು ಒದಗಿಸುವುದು)?

ಈ ಪೈಕಿ ಈವರೆಗೆ 2008–09 ರಲ್ಲಿ ರೂ. 1099.50 ಲಕ್ಷಗಳು ಮತ್ತು 2009–10ರಲ್ಲಿ ರೂ. 166.50 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ. ಜಿಲ್ಲಾವಾರು ವಿವರ ಅನುಬಂಧ–1 ಮತ್ತು 2 ರಲ್ಲಿ ನೀಡಿದೆ.